ಆ) ಕೊಪ್ಪಳ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಕುಣಿಕೇರಿ, ಚಿಲವಾಡಗಿ, ಹಟ್ಟಿ ಗ್ರಾಮಗಳಲ್ಲಿ ಸರ್ಕಾರಿ ಪ್ರೌಢಶಾಲೆಗಳನ್ನು ಪ್ರಾರಂಭಿಸಲು ಬೇಡಿಕೆ ಬಂದಿದ್ದು, ಉಳಿದ ಹಲವಾಗಿಲು ಗ್ರಾಮದಲ್ಲಿ ಸರ್ಕಾರಿ ಪ್ರೌಢಶಾಲೆಗಳನ್ನು ಪ್ರಾರಂಭಿಸಲು ಬೇಡಿಕೆ ಬಂದಿರುವುದಿಲ್ಲ.

ಅನುದಾನ ಹಾಗೂ ಅವಶ್ಯಕತೆಯನ್ನು ಆಧರಿಸಿ ಪ್ರೌಢ ಶಾಲೆಗಳನ್ನು ಮಂಜೂರು ಮಾಡುವ ಬಗ್ಗೆ ಪರಿಶೀಲಿಸಲಾಗುವುದು.

ಮಂಗಳೂರು ವಿಶ್ವವಿದ್ಯಾಲಯ ಮೂಲ ಸೌಕರ್ಯ

756 (1407) ಶ್ರೀ ಖಾದರ್ ಯು.ಟಿ. (ಮಂಗಳೂರು) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಗಳೂರು ವಿಶ್ವವಿದ್ಯಾಲಯದಲ್ಲಿ ಕನಿಷ್ಠ ಮೂಲಭೂತ ಸೌಲಭ್ಯಗಳು ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಇದಕ್ಕಾಗಿ ಮಂಜೂರು ಮಾಡಿರುವ ಹಣ ಎಷ್ಟು;

ಇ) ಮೂಲಭೂತ ಸೌಲಭ್ಯಗಳನ್ನು ದೊರಕಿಸಿಕೊಡಲು ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಅರವಿಂದ ಲಿಂಬಾವಳಿ (ಉನ್ನತ ಶಿಕ್ಷಣ ಸಚಿವರು) :

ಅ) ಮಂಗಳೂರು ವಿಶ್ವವಿದ್ಯಾನಿಲಯಕ್ಕೆ ಆಡಿಟೋರಿಯಂ, ಹೊರಾಂಗಣ ಕ್ರೀಡಾಂಗಣ, ವಸತಿ ಗೃಹಗಳು ಇತ್ಯಾದಿಗಳ ಅವಶ್ಯಕತೆ ಇದ್ದು, ಇದರಲ್ಲಿ ವಿಶ್ವವಿದ್ಯಾಲಯದ ಆಂತರಿಕ ಸಂಪನ್ಮೂಲಗಳಿಂದ ಆಡಿಟೋರಿಯಂನ್ನು ನಿರ್ಮಿಸಲಾಗುತ್ತಿದ್ದು 400 ಮೀಟರ್ ಹೊರಾಂಗಣ ಕ್ರೀಡಾಂಗಣ, ವಸತಿ ಗೃಹಗಳ ನಿರ್ಮಾಣ ಅಗತ್ಯವಾಗಿರುತ್ತದೆ.

ಆ) ಮಂಗಳೂರು ವಿಶ್ವದ್ಯಾಲಯದ ಮೂಲಭೂತ ಸೌಲಭ್ಯಕ್ಕಾಗಿ ಪ್ರತ್ಯೇಕ ಅನುದಾನ ಮಂಜೂರಾಗಿರುವುದಿಲ್ಲ. 2009–10ನೇ ಸಾಲಿನಲ್ಲಿ ರೂ. 320.00 ಲಕ್ಷ ಅಭಿವೃದ್ಧಿ ಅನುದಾನವಾಗಿ ಮಂಜೂರು ಮಾಡಿದ್ದು, ಈ ಅನುದಾನದಲ್ಲಿ ರೂ. 150.00 ಲಕ್ಷ ಕೊಡಗು ಜಿಲ್ಲೆಯ ಕುಶಾಲನಗರ ಹೋಬಳಿಯ ಚಿಕ್ಕಳುವಾರದಲ್ಲಿ ಉದ್ದೇಶಿಸಲಾದ ಸ್ನಾತಕೋತ್ತರ ಕೇಂದ್ರದ ಸ್ಥಾಪನೆಗೆ ವೆಚ್ಚ ಮಾಡಲಾಗುತ್ತಿದೆ.

ಇ) ಹಂತ ಹಂತವಾಗಿ ಹಣಕಾಸಿನ ಲಭ್ಯತೆಗನುಗುಣವಾಗಿ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ.

ಕಳ್ಳಭಟ್ಟಿ ದಂಧೆ

758 (1409) ಶ್ರೀ ಖಾದರ್ ಯು.ಟಿ. (ಮಂಗಳೂರು) : ಮಾನ್ಯ ಅಬಕಾರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಕಳ್ಳಭಟ್ಟಿ ದಂಧೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಎಷ್ಟು ಪ್ರಕರಣಗಳು ವರದಿಯಾಗಿವೆ (ವಿವರ ನೀಡುವುದು);

ಆ) ಈ ಪ್ರಕರಣಗಳಲ್ಲಿ ಸಾವು-ನೋವಿನ ಸಂಖ್ಯೆ ಎಷ್ಟು;

ಇ) ಕಳ್ಳಭಟ್ಟಿ ದಂಧೆಯನ್ನು ನಿಯಂತ್ರಿಸಲು ಕೈಗೊಂಡಿರುವ ಕ್ರಮಗಳೇನು?

ಶ್ರೀ ಎಂ.ಪಿ.ರೇಣುಕಾಚಾರ್ಯ (ಅಬಕಾರಿ ಸಚಿವರು) :

ಅ) ಬಂದಿದೆ.

ರಾಜ್ಯಾದ್ಯಂತ 2009ರ ಜುಲೈ ನಿಂದ 2010ರ ಜನವರಿವರೆಗೆ ಒಟ್ಟು 2033 ಪ್ರಕರಣಗಳು ದಾಖಲಾಗಿರುತ್ತದೆ. (ವಿವರಗಳನ್ನು ಅನುಬಂಧದಲ್ಲಿ ಲಗತ್ತಿಸಿದೆ)

ಆ) ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲ್ಲೂಕಿನ ಅಮ್ಮಗಾರಿ ಪೇಟೆ ಗ್ರಾಮದಲ್ಲಿ ದಿ: 04-02-2010 ರಂದು ಶಂಕಿತ ಕಳ್ಳಭಟ್ಟಿ ಸೇವನೆಯಿಂದ ಐವರು ಮೃತಪಟ್ಟಿರುತ್ತಾರೆ.

ಇ) ಜಾರಿ ಮತ್ತು ತನಿಖಾ ಕಾರ್ಯವನ್ನು ಚುರುಕುಗೊಳಿಸಲಾಗಿದೆ. ರಾಜ್ಯಾದ್ಯಂತ 2118 ಕಳ್ಳಭಟ್ಟಿ ಕೇಂದ್ರಗಳನ್ನು ಗುರುತಿಸಿದ್ದು, ಇವುಗಳನ್ನು ಸಣ್ಣ, ಮಧ್ಯಮ ಹಾಗೂ ದೊಡ್ಡ ಕೇಂದ್ರಗಳಾಗಿ ವಿಂಗಡಿಸಿ ಸಮಸ್ಯೆಯ ತೀವ್ರ ಮತ್ತು ಇತರೆ ಸನ್ನಿವೇಶಗಳನ್ನು ಆಧರಿಸಿ ಸಮಸ್ಯೆಯನ್ನು ಪೂರ್ಣವಾಗಿ ನಿವಾರಿಸಲು ಕ್ರಿಯಾಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಕಳ್ಳಭಟ್ಟಿ ಕೇಂದ್ರ ಗಳೆಂದು ಗುರುತಿಸಲಾಗಿರುವ ಸ್ಥಳಗಳ ಮೇಲೆ ಸತತವಾಗಿ ದಾಳಿಗಳನ್ನು ನಡೆಸಲಾಗುತ್ತಿದೆ. ರಾಜ್ಯಾದ್ಯಂತ ಇರುವ 6002 ಗ್ರಾಮ ಪಚಾಯ್ತಿ ವ್ಯಾಪ್ತಿಯಲ್ಲಿ ಕಳ್ಳಭಟ್ಟಿ/ಸಾರಾಯಿ ಸೇವೆಯ ದುಷ್ಪರಿಣಾಮಗಳ ಬಗ್ಗೆ ಜನಜಾಗೃತಿ ಸಭೆ ಏರ್ಪಡಿಸಿ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಕ್ರಮ